ದಿನಾಂಕ : DATE: 30/11/2019
ಇಲಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:

### ಅಶೋಕ್, ಶೋಭಾ, ನಳಿನ್ ಸಮ್ಮುಖದಲ್ಲಿ ನಾಮಪತ್ರ ಸಲ್ಲಿಕೆ | ಕಾಂಗ್ರೆಸ್ ಅಭ್ಯರ್ಥಿ ಇನ್ನೂ ಅಂತಿಮವಾಗಿಲ್ಲ

# ರಾಜ್ಯಸಭಾ ಚುನಾವಣೆಗೆ ಕೈ ನಿರಾಸಕ್ತಿ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ರಾಜ್ಯದಲ್ಲಿ ನಡೆಯುತ್ತಿರುವ ವಿಧಾನಸಭಾ ಉಪಚುನಾವಣೆ ಜತೆಜತೆಯಲ್ಲಿ ಎದುರಾಗಿರುವ ರಾಜ್ಯಸಭಾ ಉಪಚುನಾವಣೆಗೆ ಬಿಜೆಪಿ ಅಭ್ಯರ್ಥಿಯನ್ನು ಅಂತಿಮಗೊಳಿಸಿದ್ದರೆ, ಇನ್ನೊಂದೆಡೆ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ವಿಚಾರದಲ್ಲಿ ಹಿಂದೇಟು ಹಾಕುತ್ತಿದೆ.

ಸೋಮವಾರದಿಂದ ನಾಮಪತ್ರ ಸಲ್ಲಿಕೆಗೆ ಅವಕಾಶವಿದ್ದರೂ, ಕಾಂಗ್ರೆಸ್ ಉಪಚುನಾವಣೆ ಎನ್ನುವ ಕಾರಣ ನೀಡಿ ರಾಜ್ಯಸಭಾ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಸಭೆಗಳನ್ನು ನಡೆಸಿಲ್ಲ. ಇದರೊಂದಿಗೆ ಯಾರನ್ನು ಅಭ್ಯರ್ಥಿಯನ್ನಾಗಿ ನಿಲ್ಲಿಸಬೇಕೆಂಬ ಬಗ್ಗೆಯೂ ಯಾವುದೇ ತೀರ್ಮಾನ ಕೈಗೊಂಡಿಲ್ಲ ಎನ್ನುವ ಮಾತುಗಳು ಕೇಳಿಬಂದಿದೆ.

ಕಾಂಗ್ರೆಸ್‌ನ ರಾಮಮೂರ್ತಿ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಚುನಾವಣೆ ನಡೆಯುತ್ತಿದೆ. ಈ ಸ್ಥಾನವನ್ನು ಪಡೆಯಬೇಕೆಂಬ ಇಚ್ಛೆ ಇದ್ದರೂ, ಸದ್ಯಕ್ಕೆ ಕಾಂಗ್ರೆಸ್ ಬಳಿ ರಾಜ್ಯಸಭಾ ಚುನಾವಣೆ ಗೆಲ್ಲುವುದಕ್ಕೆ ಅಗತ್ಯವಿರುವಷ್ಟು ಮತಗಳಿಲ್ಲ. ಆದ್ದರಿಂದ ಚುನಾವಣೆಯಲ್ಲಿ ಸ್ಪರ್ಧಿಸಬೇಕೆ? ಅಥವಾ 'ಪಕ್ಷಾಂತರದ ವಿರುದ್ಧ ಹೋರಾಟ' ಎನ್ನುವ ಲೆಕ್ಕಾಚಾರದಲ್ಲಿ ಚುನಾವಣೆಯನ್ನು ಬಹಿಷ್ಕರಿಸಬೇಕೆ ಎನ್ನುವ ಗೊಂದಲದಲ್ಲಿ ಕಾಂಗ್ರೆಸ್ ನಾಯಕರಿದ್ದಾರೆ. ಆದ್ದರಿಂದ ಇಲ್ಲಿಯವರೆಗೆ ಈ ಸಂಬಂಧ ಯಾವುದೇ ಸಭೆಗಳು ನಡೆದಿಲ್ಲ ಎನ್ನುವ ಮಾತುಗಳು ಕೇಳಿಬಂದಿದೆ.

**ಆಕಾಂಕ್ಷಿಗಳೇ ಇಲ್ಲ:** ಇನ್ನು ರಾಜ್ಯಸಭಾ ಉಪಚುನಾವಣೆಯಲ್ಲಿ ಗೆಲ್ಲುವುದಕ್ಕೆ ಅಗತ್ಯವಿರುವ ಮತಗಳು ಬಿಜೆಪಿ ಬಳಿ ಈಗಾಗಲೇ ಇವೆ. ರಾಜ್ಯಸಭಾ ಚುನಾವಣಾ ಹೊತ್ತಿಗೆ ಮತ್ತಷ್ಟು ಶಾಸಕರು ಬಿಜೆಪಿಯಿಂದ ಗೆದ್ದರೆ ಅವುಗಳು ಬಿಜೆಪಿಗೆ ಬರಲಿವೆ. ಆದ್ದರಿಂದ ಈ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಅಸಾಧ್ಯ. ಆದ್ದರಿಂದ ಟಿಕೆಟ್ ನೀಡುವಂತೆ ಯಾವುದೇ ನಾಯಕರು ರಾಜ್ಯ ಅಥವಾ ರಾಷ್ಟ್ರ ನಾಯಕರ ಬಳಿ ಕೇಳಿಲ್ಲ ಎನ್ನುವ ಮಾತುಗಳು ಕೇಳಿಬಂದಿದೆ.

ಕಾಂಗ್ರೆಸ್‌ಗೆ ಜೆಡಿಎಸ್ ಬೆಂಬಲ ನೀಡಿದರೆ ರಾಜ್ಯಸಭಾ ಚುನಾವಣೆಯಲ್ಲಿ ಬಿಜೆಪಿಗೆ ಪ್ರಬಲ ಸ್ಪರ್ಧೆ ಒಡ್ಡಬಹುದು. ಆದರೆ ಸದ್ಯದ ಪರಿಸ್ಥಿತಿಯಲ್ಲಿ ಜೆಡಿಎಸ್ ನಾಯಕರು ಕಾಂಗ್ರೆಸ್‌ಗೆ ಬೆಂಬಲ ನೀಡುವ ಸಾಧ್ಯತೆ ತೀರಾ ಕಡಿಮೆ ಇರುವುದರಿಂದ, ಯಾರೊಬ್ಬರು 'ರಿಸ್ಕ್' ತೆಗೆದುಕೊಳ್ಳಲು ಮುಂದಾಗುತ್ತಿಲ್ಲ. ಸೋಲುವ ಚುನಾವಣೆ ಸಹವಾಸವೇ ಬೇಡ ಎನ್ನುವ ಲೆಕ್ಕಾಚಾರದಲ್ಲಿ ನಾಯಕರಿದ್ದಾರೆ ಎಂದು ಮೂಲಗಳು ತಿಳಿಸಿವೆ. ಬಿಜೆಪಿ ಈಗಾಗಲೇ ಅಭ್ಯರ್ಥಿಯನ್ನು ಘೋಷಿಸಿದ್ದು, ಜೆಡಿಎಸ್ ತಟಸ್ಥವಾಗುವ ಲೆಕ್ಕಾಚಾರದಲ್ಲಿದೆ. ಆದ್ದರಿಂದ ಕಾಂಗ್ರೆಸ್ ನಾಯಕರು ಕಾದು ನೋಡುವ ಲೆಕ್ಕಾಚಾರದಲ್ಲಿದ್ದಾರೆ.



ಡಿ.12ರಂದು ನಡೆಯಲಿರುವ ರಾಜ್ಯಸಭಾ ಉಪಚುನಾವಣೆಗೆ ಬಿಜೆಪಿ ಅಭ್ಯರ್ಥಿ ಕೆ.ಸಿ.ರಾಮಮೂರ್ತಿ ನಾಮಪತ್ರ ಸಲ್ಲಿಸಿದರು. ಈ ವೇಳೆ ಡಿಸಿಎಂ ಗೋವಿಂದ ಕಾರಜೋಳ, ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್, ಸಚಿವ ಆರ್.ಅಶೋಕ್, ಶೋಭಾ ಕರಂದ್ಲಾಜೆ, ಸಂಸದ ರಾಜೀವ್ ಚಂದ್ರಶೇಖರ್ ಇದ್ದರು.

## ಕೆ.ಸಿ.ರಾಮಮೂರ್ತಿ ಉಮೇದುವಾರಿಕೆ ಸಲ್ಲಿಕೆ

ರಾಜ್ಯಸಭೆಗೆ ಬಿಜೆಪಿ ಅಭ್ಯರ್ಥಿಯನ್ನಾಗಿ ರಾಮಮೂರ್ತಿ ಅವರನ್ನು ಬುಧವಾರ ಅಂತಿಮಗೊಳಿಸಿತ್ತು. ಆದ್ದರಿಂದ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನದ ಬಿಜೆಪಿಯಿಂದ ಕೆ.ಸಿ.ರಾಮಮೂರ್ತಿ ಅವರೇ ನಾಮಪತ್ರ ಸಲ್ಲಿಸಿದ್ದಾರೆ. ಶುಕ್ರವಾರ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲು, ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಕೇಂದ್ರ ಸಚಿವ ಸದಾನಂದಗೌಡ, ಆರ್.ಅಶೋಕ್ ಅವರೊಂದಿಗೆ ತೆರಳಿ ರಾಜ್ಯಸಭೆಗೆ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಕೆಲ ತಿಂಗಳ ಹಿಂದೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ರಾಮಮೂರ್ತಿ ಅವರು ತಿಂಗಳ ಹಿಂದೆ ಬಿಜೆಪಿ ಸೇರಿದ್ದರು. ರಾಮಮೂರ್ತಿ ಅವರು ರಾಜೀನಾಮೆ ನೀಡುತ್ತಿದ್ದಂತೆ, ಈ ಸ್ಥಾನಕ್ಕೆ ಅವರನ್ನೇ ಬಿಜೆಪಿಯಿಂದ ಆಯ್ಕೆ ಮಾಡಲಾಗುತ್ತದೆ ಎನ್ನುವ ಮಾತುಗಳು ಕೇಳಿಬಂದಿತ್ತು. ಅದೇ ರೀತಿ ಬಿಜೆಪಿ ತನ್ನ ಅಧಿಕೃತ ಅಭ್ಯರ್ಥಿಯನ್ನಾಗಿ ರಾಮಮೂರ್ತಿ ಅವರಿಗೆ ಟಿಕೆಟ್ ನೀಡಿದ್ದರಿಂದ ಶುಕ್ರವಾರ ನಾಮಪತ್ರ ಸಲ್ಲಿಸಿದರು.

ಆಪರೇಷನ್ ಕಮಲಕ್ಕೆ ಒಳಗಾಗಿ ಬಿಜೆಪಿ ಸೇರಿಲ್ಲ. ಬದಲಿಗೆ ಕಳೆದ ಕೆಲ ವರ್ಷದಿಂದ ನರೇಂದ್ರ ಮೋದಿ ನೇತೃತ್ವದ ಸರಕಾರ ದೇಶದ ಅಭಿವೃದ್ಧಿಗೆ ಮಾಡಿರುವ ಯೋಜನೆ ನೋಡಿ ಬಿಜೆಪಿಗೆ ಬಂದಿದ್ದೇನೆ. ಇನ್ನು ಕೆಲವರು ಹೇಳುತ್ತಿರುವಂತೆ ನಾನು ಐಟಿ ದಾಳಿಗೆ ಬೆದರಿ ಪಕ್ಷಾಂತರ ಮಾಡಿಲ್ಲ

– **ಕೆ.ಸಿ.ರಾಮಮೂರ್ತಿ**
ಬಿಜೆಪಿ ರಾಜ್ಯಸಭಾ ಅಭ್ಯರ್ಥಿ

- ಜೆಡಿಎಸ್, ಕಾಂಗ್ರೆಸ್‌ಗೆ ಬೆಂಬಲ ನೀಡುವ ಸಾಧ್ಯತೆ ತೀರಾ ಕಡಿಮೆ
- ಸೋಲುವ ಚುನಾವಣೆ ಸಹವಾಸವೇ ಬೇಡ ಎನ್ನುವ ಲೆಕ್ಕಾಚಾರದಲ್ಲಿ ದಳ ನಾಯಕರು
- ಕಾದು ನೋಡುವ ಲೆಕ್ಕಾಚಾರದಲ್ಲಿ ಕೈ ನಾಯಕರು
- ಎರಡೂ ಪಕ್ಷದ ನಾಯಕರು ಸೇರಿ ಪಕ್ಷೇತರ ಅಭ್ಯರ್ಥಿಯನ್ನು ನಿಲ್ಲಿಸುವ ಬಗ್ಗೆ ಚರ್ಚೆ ನಡೆಯುವ ಸಾಧ್ಯತೆ